ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ ,
ಕುಂದಾಪುರ

ಸಿ.ಸಿ. ನಂಬ್ರಃ1982/2014

ಚಾಸಾಃ4 ಪ್ರಾಸಾಃ3

ದಿನಾಂಕಃ 03.07.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಡಾ. ರಾಬರ್ಟ್ ರೆಬೆಲ್ಲೋ |
| ತಂದೆಯ ಹೆಸರು | : | ಲೇಟ್ ಜೆರೋಮ ರೆಬೆಲ್ಲೋ |
| ವಯಸ್ಸು | : | 57 ವರ್ಷ |
| ಉದ್ಯೋಗ | : | ವೈದ್ಯಾಧಿಕಾರಿ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ</u>**

ನಾನು ದಿಃ 01-07-2005 ರಿಂದ ದಿಃ 03-06-2024ರವರೆಗೆ ಕುಂದಾಪುರದ ಸರಕಾರಿ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 16-05-2014 ರಂದು ಸಂಜೆ 5-30 ಗಂಟೆಗೆ ನಾನು ಸರಕಾರಿ ಆಸ್ಪತ್ರೆಯಲ್ಲಿ ಕರ್ತವ್ಯದಲ್ಲಿ ಇದ್ದಾಗ ಪ್ರಾಸಾ-1ರವರು ಹಲ್ಲೆಯ ಹಿನ್ನೆಲೆಯಲ್ಲಿ ನಮ್ಮ ಆಸ್ಪತ್ರೆಗೆ ದಾಖಲಾಗಿದ್ದು, ಅವರನ್ನು ಪರೀಕ್ಷಿಸಲಾಗಿ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತದೆ.

1. ತಲೆಯ ಎಡಭಾಗದಲ್ಲಿ ಕಿವಿಯ ಮೇಲ್ಗಡೆ 2x2 c.m ಅಳತೆಯ ಹರಿದ ಗಾಯವಿದ್ದು, ಅದು ತಾಜಾ ಸ್ವರೂಪದ ಗಾಯವಾಗಿರುತ್ತದೆ. ಸದ್ರಿ ಗಾಯವು ಸಾದಾ ಸ್ವರೂಪದ್ದಾಗಿದ್ದು, ಈ ಕುರಿತು ನಾನು ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ. ಸಾಕ್ಷಿ ದಾಖಲೆಯನ್ನು ನಿಪಿ-3 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಎಂ ಡಿ ಎಸ್ ರವರಿಂದಃ</u>**

ಚಾಸಾ-1 ರವರೊಂದಿಗೆ ಬೇರೆ ಯಾರೂ ಬಂದಿರಲಿಲ್ಲ. ದೈನಂದಿನ ಕೆಲಸ ಮಾಡುವಾಗ ದೊರಗಾದ ನೆಲದ ಮೇಲೆ ಆಯಾ ತಪ್ಪಿ ಬಿದ್ದಾಗ ನಿಪಿ-3 ರಲ್ಲಿ ನಮೂದಿಸಿರುವ ಗಾಯಗಳು ಆಗುವ ಸಾಧ್ಯತೆ ಇರುತ್ತದೆ ಎಂದರೆ ಸರಿ. ಯಾರು ಯಾವುದರಿಂದ ಹಲ್ಲೆ ಮಾಡಿರುತ್ತಾರೆ ಎಂಬ ಬಗ್ಗೆ ಗಾಯದ ಪ್ರಮಾಣ ಪತ್ರದಲ್ಲಿ ನಮೂದಿಸಿಲ್ಲ ಎಂದರೆ ಸರಿ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**